# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 20-03-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
5. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
7. ಶ್ರೀ ಕಾರ್ತಿಕ್, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
8. ಶ್ರೀ ಮುರಳೀಧರ, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) <u>ಶ್ರೀ ಮುರಳೀಧರ್, ಸ್ಥಳೀಯರು ಮಾತನಾಡುತ್ತಾ,</u> ನಗರೋತ್ಥಾನ ಅನುದಾನದ ಮಾಹಿತಿ ನೀಡಿ, ರಾಮಯ್ಯ ರಸ್ತೆ ಡಾಂಬರೀಕರಣ ಮಾಡಬೇಕು, ವಾರ್ಡಿನ ಎಲ್ಲಾ ಪಾರ್ಕ್‌ಗಳನ್ನು ಅಬಿವೃದ್ಧಿ ಪಡಿಸಬೇಕು, ವಾಲ್ ಮೆನ್‌ರವರು ಸರಿಯಾದ ಸಮಯಕ್ಕೆ ನೀರನ್ನು ಬಿಡುವುದಿಲ್ಲ, ಹಾಗೂ ಟ್ರೇಡ್ ಲೈಸೆನ್ಸ್ ನವೀಕರಣವನ್ನು ನಿಗಧಿತ ಸಮಯದಲ್ಲಿ ನೀಡದೇ ಇರುವುದು ಕಂಡುಬಂದಿರುತ್ತದೆ. ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ಚೈನ್ ಕಳ್ಳತನ, ದರೋಡೆ ಪ್ರಕರಣ ಹೆಚ್ಚಾಗಿದ್ದು, ಅವಶ್ಯವಿರುವ ಸ್ಥಳಗಳಲ್ಲಿ ಹೊಸದಾಗಿ ಸಿಸಿ ಕ್ಯಾಮೆರಾವನ್ನು ಅಳವಡಿಸಲು ಸಭೆಗೆ ತಿಳಿಸಿದರು.

2) <u>ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ರವರು ಮಾತನಾಡುತ್ತಾ,</u> ಇತ್ತೀಚೆಗೆ ಕೋವಿಡ್ ಸೋಂಕು ಹೆಚ್ಚಾಗಿದ್ದು, ಈ ಬಗ್ಗೆ ಆಟೋ ವಾಹನದಲ್ಲಿ ಕೋವಿಡ್-19ರ ಬಗ್ಗೆ ಜನರಿಗೆ ಜಾಗೃತಿ ಮೂಡಿಸುತ್ತಿದ್ದು, ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಬೀದಿ ವ್ಯಾಪಾರಿಗಳು ಜಾಸ್ತಿ ಆಗಿರುವುದರಿಂದ ಮಾರ್ಷಲ್‌ಗಳಿಗೆ ಮಾಸ್ಕ್ ಧರಿಸದ ಜನರಿಗೆ ದಂಡವನ್ನು ಹಾಕಿ, ಜಾಗೃತಿ ಮೂಡಿಸಬೇಕೆಂದು ಮಾರ್ಷ್‌ಲ್‌ಗಳಿಗೆ ತಿಳಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

3) **ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ವಿಚಾರಣೆ ಮಾಡಿದಾಗ, ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮಾತನಾಡಿ, 14ನೇ ಹಣಕಾಸು ಅನುದಾನದಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಲಾಗಿದೆ ಹಾಗೂ ಸತ್ಯಮೂರ್ತಿ ರಸ್ತೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದರಿಂದ ಸದರಿ ಪ್ರವೇಶವಲ್ಲಿ ಹೊಸದಾಗಿ ಬೋರ್‌ವೆಲ್ ಕೊರೆಯಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

<u>ಪ್ರತಿಯನ್ನು</u>

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.